# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಜಂಟಿ ಆಯುಕ್ತರವರ ಕಛೇರಿ, ಕಲ್ಯಾಣ ವಿಭಾಗ, ಪಶ್ಚಿಮ ವಲಯ,
ಸಂಪಿಗೆ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು-560 020.

**ಸಂಖ್ಯೆ: ಬೃಬೆಂಮಪಾ/ಪವ/ಕ.ಶಾ/34/2010-11** **ದಿನಾಂಕ: 8/10/2010**

## ಸಾರ್ವಜನಿಕ ಪ್ರಕಟಣೆ

ಈ ಮೂಲಕ ಸಾರ್ವಜನಿಕರಲ್ಲಿ ತಿಳಿಯಪಡಿಸುವುದೇನೆಂದರೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪಶ್ಚಿಮ ವಲಯದ ಕಲ್ಯಾಣ ಇಲಾಖೆಯಿಂದ 2010-11ನೇ ಸಾಲಿಗೆ ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ, ಅಲ್ಪಸಂಖ್ಯಾತರು, ಮಹಿಳೆಯರು, ಅಂಗವಿಕಲರು ಹಾಗೂ ಸಾಮಾನ್ಯ ವರ್ಗದ ಸಮುದಾಯದವರಿಗೆ ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ಸಾಮಾಜಿಕವಾಗಿ ಹಮ್ಮಿಕೊಂಡಿರುವ ವಿವಿಧ ಕಲ್ಯಾಣ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಈ ಕೆಳಕಂಡಂತೆ ವಿವರಿಸಿರುವ ಕಾರ್ಯಕ್ರಮಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಅಹ್ವಾನಿಸಲಾಗಿದೆ.

### I. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ, ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದ ಕಲ್ಯಾಣ ಕಾರ್ಯಕ್ರಮಗಳು

**ಅ). ತರಬೇತಿ ಕಾರ್ಯಕ್ರಮಗಳು :-**

| ಕ್ರ.ಸಂ | ಕಾರ್ಯಕ್ರಮದ ವಿವರ |
|---|---|
| 1. | ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಹಾಯಧನ:- ಕನಿಷ್ಠ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. |
| 2. | ಮಾನವ ಸಂಪನ್ಮೂಲ ಅಭಿವೃದ್ಧಿ (ಇಂಗ್ಲೀಷ್ ಸ್ಪೀಕಿಂಗ್ ಕೋರ್ಸ್ ಮತ್ತು ಕೆಪಾಸಿಟಿ ಬಿಲ್ಡಿಂಗ್ ತರಬೇತಿ:- ಅವಧಿ 3 ತಿಂಗಳು, ವಿದ್ಯಾಭ್ಯಾಸ: ಕನಿಷ್ಠ 8ನೇ ತರಗತಿ ಉತ್ತೀರ್ಣರಾಗಿರಬೇಕು, ವ್ಯಾಸಂಗದ ದೃಢೀಕರಣ ಪತ್ರವನ್ನು ನೀಡಬೇಕು. ಕನ್ನಡ ಅಥವಾ ಇಂಗ್ಲೀಷ್ ಭಾಷೆಯಲ್ಲಿ ಐಚ್ಛಿಕ ವಿಷಯವಾಗಿ ಶಿಕ್ಷಣ ಪಡೆದಿರಬೇಕು. |
| 3. | ಗಣಕಯಂತ್ರ ಹಾರ್ಡ್‌ವೇರ್/ಸಾಫ್ಟ್‌ವೇರ್ ತರಬೇತಿ: ಅವಧಿ 3 ತಿಂಗಳು, ವಿದ್ಯಾರ್ಹತೆ: ಕನಿಷ್ಠ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು. |
| 4. | ಕಾಲ್ ಸೆಂಟರ್ ಬಿಪಿಓ ತರಬೇತಿ:- ಅವಧಿ 3 ತಿಂಗಳು, ವಿದ್ಯಾರ್ಹತೆ: ಅಭ್ಯರ್ಥಿಗಳು ಕನಿಷ್ಠ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಹಾಗೂ ಆಂಗ್ಲ ಭಾಷೆಯಲ್ಲಿ ಮಾತನಾಡಲು ಸಾಮಾನ್ಯ ಜ್ಞಾನವಿರಬೇಕು. |

| | |
|---|---|
| 5. | ವಾಹನ ಚಾಲನ ತರಬೇತಿ:-(ಲಘು ವಾಹನ ಮತ್ತು ಭಾರಿ ವಾಹನ) ಅವಧಿ 3 ತಿಂಗಳು, ವಿದ್ಯಾರ್ಹತೆ ಕನಿಷ್ಠ 7ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. |

## II.ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕಲ್ಯಾಣ ಕಾರ್ಯಕ್ರಮಗಳು

### ಅ). ಶೈಕ್ಷಣಿಕ ಕಾರ್ಯಕ್ರಮಗಳು:-

| ಕ್ರ.ಸಂ | ಕಾರ್ಯಕ್ರಮದ ವಿವರ |
|---|---|
| 1. | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪೌರಕಾರ್ಮಿಕರು ಹಾಗೂ ಕಡಿಮೆ ವರಮಾನವುಳ್ಳ ಗ್ರೂಫ್ ಡಿ ನೌಕರರ ಮಕ್ಕಳ ವ್ಯಾಸಂಗಕ್ಕಾಗಿ ಸಹಾಯಧನ. |
| 2. | ಸರ್ಕಾರದಿಂದ ಮಾನ್ಯತೆ ಪಡೆದ ವಸತಿ ಶಾಲೆಗಳಲ್ಲಿ 5 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಮೆರಿಟ್ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯ. |
| 3. | ಸರ್ಕಾರಿ/ಸರ್ಕಾರದ ಅನುದಾನಿತ ಶಾಲಾ/ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿಗಳ ಪ್ರವೇಶ ಶುಲ್ಕ, ಭೋದನಾ ಶುಲ್ಕ, ಪರೀಕ್ಷಾ ಶುಲ್ಕದ ಮರುಪಾವತಿ ಮತ್ತು ನೋಟ್ ಪುಸ್ತಕಗಳು, ಲೇಖನ ಸಾಮಾಗ್ರಿಗಳು, ಸಮವಸ್ತ್ರ ಹಾಗೂ ಇತ್ಯಾದಿಗಳ ಖರೀದಿಯ ಮರುಪಾವತಿ. |
| 4. | ಕ್ರೀಡಾ ಚಟುವಟಿಕೆಗಳಲ್ಲಿ ಭಾಗವಹಿಸುವ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯ. |
| 5. | ಪರಿಶಿಷ್ಟ ಜಾತಿ/ಪಂಗಡದ ವಿದ್ಯಾರ್ಥಿಗಳಿಗೆ ಸಂಜೆ ವೇಳೆಯ ವಿಶೇಷ ತರಗತಿಗಳನ್ನು ನಡೆಸಲು ಶಾಲಾ/ಕಾಲೇಜುಗಳಿಗೆ ಆರ್ಥಿಕ ಸಹಾಯ. |
| 6. | ವಿದ್ಯಾಭ್ಯಾಸವನ್ನು ಅಪೂರ್ಣಗೊಳಿಸಿರುವ ಶಾಲಾ ಮಕ್ಕಳಿಗೆ ಶೈಕ್ಷಣಿಕ ಕಾರ್ಯಕ್ರಮ (ಪ್ರೇರಣೆ) |
| 7. | ಸರ್ಕಾರಿ/ಸರ್ಕಾರದ ಅನುದಾನಿತ ಶಾಲಾ/ಕಾಲೇಜುಗಳಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ/ಅಧ್ಯಯನ ಪ್ರವಾಸಗಳಿಗೆ ಅದರ ವೆಚ್ಚವನ್ನು ಭರಿಸುವುದು. |
| 8. | ವಿದೇಶಿ ವಿಶ್ವವಿದ್ಯಾನಿಲಯಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ಧನ. |
| 9. | ಉನ್ನತ ವ್ಯಾಸಂಗಕ್ಕಾಗಿ ಸಂದರ್ಶನಕ್ಕೆ ಹಾಜರಾಗುವ ವಿದ್ಯಾರ್ಥಿಗಳಿಗೆ ಆರ್ಥಿಕ ಸಹಾಯ. |
| 10. | ಪದವಿ ಪೂರ್ವ ಹಾಗೂ ಹೆಚ್ಚಿನ ವಿದ್ಯಾಭ್ಯಾಸಕ್ಕಾಗಿ ವಿದ್ಯಾರ್ಥಿಗಳಿಗೆ ವಿಶೇಷ ನೆರವು |
| 11. | ಮಧ್ಯಮ/ಧೀರ್ಘಕಾಲದ ಕೌಶಲ್ಯ ಅಭಿವೃದ್ಧಿ ತರಬೇತಿಗೆ ಆರ್ಥಿಕ ನೆರವು. |

| | |
|---|---|
| 12. | ಪರಿಶಿಷ್ಟ ಜಾತಿ/ಪಂಗಡಕ್ಕೆ ಸೇರಿದ ಆಡಳಿತ ಮಂಡಳಿ ನಡೆಸುವ ಶಾಲಾ ಸಂಸ್ಥೆಗಳು/ವಿದ್ಯಾರ್ಥಿ ನಿಲಯಗಳಿಗೆ ಅನುದಾನ. |
| 13. | ಸಮಾಜ ಕಲ್ಯಾಣ ಇಲಾಖೆಯು ನಡೆಸುತ್ತಿರುವ ವಿದ್ಯಾರ್ಥಿ ನಿಲಯಗಳ ಅಭಿವೃದ್ಧಿ, ಹೆಚ್ಚುವರಿಯಾಗಿ ಕಟ್ಟಡ ನಿರ್ಮಾಣ ಹಾಗೂ ಹೊಸದಾಗಿ ವಿದ್ಯಾರ್ಥಿ ನಿಲಯಗಳ ಕಟ್ಟಡಗಳನ್ನು ನಿರ್ಮಿಸಲು ಸಹಾಯಧನ. |

ಇ). <u>ಆರ್ಥಿಕ ಕಾರ್ಯಕ್ರಮಗಳು:-</u>

| ಕ್ರ.ಸಂ | ಕಾರ್ಯಕ್ರಮದ ವಿವರ |
|---|---|
| 1. | ರಾಜೀವ್ ಗಾಂಧಿ ಗ್ರಾಮಿಣ ವಸತಿ ನಿಗಮ ಇವರ ಸಹಯೋಗದೊಂದಿಗೆ ವಸತಿ ನಿರ್ಮಾಣಕ್ಕಾಗಿ ಸಹಾಯಧನ |
| 2. | ನಿರುದ್ಯೋಗಿ ಯುವಕ/ಯುವತಿಯರಿಗೆ ಪಾಲಿಕೆಯ ಆರ್ಥಿಕ ಸ್ವಾವಲಂಬನೆ ಯೋಜನೆ (ಅಭಿವೃದ್ಧಿ ನಿಗಮಗಳ/ಬ್ಯಾಂಕ್/ಹಣಕಾಸು ಸಂಸ್ಥೆಗಳಿಂದ ಟ್ಯಾಕ್ಸಿ ವಾಹನ, ಸರಕು ಸಾಗಣಿಕೆ ವಾಹನ ಅಥವಾ ವಿವಿಧ ಆರ್ಥಿಕ ಚಟುವಟಿಕೆಗಳಿಗೆ ಸಾಲ ಪಡೆದ ಫಲಾನುಭವಿಗಳಿಗೆ ಶೇ.50 ರಷ್ಟು ಅಥವಾ ಗರಿಷ್ಟ ರೂ. 1.00 ಲಕ್ಷಗಳ ಸಹಾಯಧನ) ಅಧಿಕೃತ ಪ್ರಾಧಿಕಾರದಿಂದ ಎಲ್.ಎಂ.ವಿ ವಾಹನ ಚಾಲನ ಪರವಾನಗಿ ಪಡೆದಿರಬೇಕು ಹಾಗೂ ಕನಿಷ್ಠ 8ನೇ ತರಗತಿ ವಿದ್ಯಾರ್ಹತೆ ಹೊಂದಿರಬೇಕು. |
| 3. | ನೇಮಕಾತಿ ಪ್ರಾಧಿಕಾರ ಹಾಗೂ ಇತರೆ ಹುದ್ದೆಗಳ ನೇಮಕಾತಿಗಾಗಿ ಹಾಜರಾಗುವ ಅಭ್ಯರ್ಥಿಗಳಿಗೆ ಆರ್ಥಿಕ ಸಹಾಯ. |
| 4. | ಜಿ.ಟಿ.ಟಿ.ಸಿ., ಎನ್.ಟಿ.ಟಿ.ಎಫ್., ಎನ್.ಐ.ಎಫ್.ಟಿ., ಎಸ್.ಎಂ.ಇ., ಹಾಗೂ ಇತರೆ ರಾಜ್ಯ/ಕೇಂದ್ರ ಸರ್ಕಾರದ ಸ್ವಾಮ್ಯದ ಸಂಸ್ಥೆಗಳಿಗೆ ತರಬೇತಿಗೆ ಅಭ್ಯರ್ಥಿಗಳ ಪ್ರಾಯೋಜನೆ. |
| 5. | ಸರ್ಕಾರಿ/ಸರ್ಕಾರದ ಅನುದಾನಿತ ಶಾಲಾ/ಕಾಲೇಜುಗಳಲ್ಲಿನ 10ನೇ ತರಗತಿ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ವೃತ್ತಿ ಮಾರ್ಗದರ್ಶನ ಮತ್ತು ವ್ಯಕ್ತಿವಿಕಾಸನ ಕಾರ್ಯಗಾರ. |
| 6. | ವಿದ್ಯಾಭ್ಯಾಸವನ್ನು ಅಪೂರ್ಣಗೊಳಿಸಿರುವ ಶಾಲಾ/ಕಾಲೇಜು ಮಕ್ಕಳಿಗೆ ವೃತ್ತಿ ತರಬೇತಿ (ಟಿ.ವಿ/ವೀಡಿಯೋಮೆಕ್ಯಾನಿಕ್, ಪ್ಲಂಬರ್/ಎಲೆಕ್ಟ್ರೀಷಿಯನ್/ಮೊಬೈಲ್/ ಲ್ಯಾಬ್ ಟೆಕ್ನೀಷಿಯನ್) |
| 7. | ಸರ್ಕಾರಿ ಕೈಗಾರಿಕ ಪ್ರದೇಶಗಳಲ್ಲಿ ಕೈಗಾರಿಕ ನಿವೇಶನಗಳು/ಉದ್ದಿಮೆ ಶೆಡ್‌ಗಳ ಸ್ವಾಧೀನಕ್ಕೆ ಸಹಾಯಧನ. |
| 8. | ಕೊಳಚೆ ಪ್ರದೇಶದ ನಿವಾಸಿಗಳಿಗೆ ಹಾಗೂ ಪೌರ ಕಾರ್ಮಿಕರಿಗೆ ಸಾಕ್ಷರತೆ ಮತ್ತು ಕೌಶಲ್ಯ ಅಭಿವೃದ್ದಿ ತರಬೇತಿ. |

ಈ). **ಇತರೆ ಕಾರ್ಯಕ್ರಮಗಳು:-**

| ಕ್ರ.ಸಂ | ಕಾರ್ಯಕ್ರಮದ ವಿವರ |
|---|---|
| 1. | ಮಧ್ಯಪಾನ ಅಭ್ಯಾಸ ತ್ಯಜಿಸಲು ಮಧ್ಯಪಾನ ನಿಷೇಧ ಕಾರ್ಯಕ್ರಮ (ಸ್ವಯಂ ಸೇವಾ ಸಂಸ್ಥೆಯೊಂದಿಗೆ) |
| 2. | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ಯೋಗಸ್ಥ ಮಹಿಳೆಯರಿಗೆ ಹೊಸದಾಗಿ ಹಾಸ್ಟೆಲ್‌ಗಳನ್ನು ನಿರ್ಮಿಸಲು ಸಹಾಯಧನ. |
| 3. | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಕುಟುಂಬದ ಮಕ್ಕಳಿಗೆ ಶಿಶುವಿಹಾರ/ಬಾಲವಾಡಿಗಳನ್ನು ನಿರ್ಮಿಸಲು ಸಹಾಯಧನ. |
| 4. | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದವರ ಶಾಲಾ/ಕಾಲೇಜು ಮಕ್ಕಳಿಗೆ ಆರೋಗ್ಯ ವಿಮೆ. |
| 5. | ವೈದ್ಯಕೀಯ ಸಹಾಯ/ಸೇವೆಗಳು, ದೌರ್ಜನ್ಯ, ನೈಸರ್ಗಿಕ ವಿಕೋಪಗಳಲ್ಲಿ ಬಲಿಯಾದವರಿಗೆ, ಅಂಗಜೋಡಣೆ, ಭಾರಿ ಶಸ್ತ್ರ ಚಿಕಿತ್ಸೆ, ಕಣ್ಣಿನ ಪೊರೆ ಶಸ್ತ್ರ ಚಿಕಿತ್ಸೆ ಹಾಗೂ ಗಂಭೀರ ಸ್ವರೂಪದ ಕಾಯಿಲೆಗಳಿಂದ ಬಳಲುತ್ತಿರುವವರಿಗೆ ಆರ್ಥಿಕ ಸಹಾಯ. |
| 6. | ಪೌರ ಕಾರ್ಮಿಕರು, ಗ್ಯಾಂಗ್‌ಮೆನ್ ಹಾಗೂ ಮಾಲಿಗಳ ಕಾಲೋನಿಗಳ ಅಭಿವೃದ್ಧಿಗಾಗಿ ಕಲ್ಯಾಣ ಕಾರ್ಯಕ್ರಮಗಳು. |
| 7. | ಈಗಾಗಲೇ ರೂಪಿಸಿರುವ ಕಾರ್ಯಕ್ರಮಗಳನ್ನು ಹೊರತುಪಡಿಸಿ ಇತರೆ ಯಾವುದಾದರೂ ಆರ್ಥಿಕ ಅಭಿವೃದ್ಧಿ ಕಾರ್ಯಕ್ರಮಗಳು. |
| 8. | ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಜನಸಾಂದ್ರಿತ ಪ್ರದೇಶಗಳಲ್ಲಿ ಗ್ರಂಥಾಲಯಗಳ ನಿರ್ಮಾಣ ಮತ್ತು ನಿರ್ವಹಣೆ. |

## III. ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದ ಕಲ್ಯಾಣ ಕಾರ್ಯಕ್ರಮಗಳು.

| ಕ್ರ.ಸಂ | ಕಾರ್ಯಕ್ರಮದ ವಿವರ |
|---|---|
| 1. | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪೌರಕಾರ್ಮಿಕರು ಹಾಗೂ ಕಡಿಮೆ ವರಮಾನವುಳ್ಳ ಗ್ರೂಪ್ 'ಡಿ' ನೌಕರರ ಮಕ್ಕಳ ಉನ್ನತ ವ್ಯಾಸಂಗಕ್ಕಾಗಿ ಧನ ಸಹಾಯ. |
| 2. | ಹಿಂದುಳಿದ ವರ್ಗಗಳ ನಿರ್ದೇಶನಾಲಯ ನಡೆಸುತ್ತಿರುವ ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗಗಳ ವಿದ್ಯಾರ್ಥಿ ನಿಲಯಗಳ ಅಭಿವೃದ್ಧಿ. |
| 3. | ಹಿಂದುಳಿದ ವರ್ಗಗಳ ಸಮುದಾಯದ ವೃತ್ತಿ ನಿರತರಿಗೆ ಅವರವರ ಕಸಬುಗಳಿಗೆ ಆರ್ಥಿಕ ಸಹಾಯ. |

| | |
|---|---|
| 4. | ನಿರುದ್ಯೋಗಿ ಯುವಕ/ಯುವತಿಯರಿಗೆ ಪಾಲಿಕೆಯ ಆರ್ಥಿಕ ಸ್ವಾವಲಂಬನೆ ಯೋಜನೆ (ಅಭಿವೃದ್ಧಿ ನಿಗಮಗಳ/ಬ್ಯಾಂಕ್/ಹಣಕಾಸು ಸಂಸ್ಥೆಗಳಿಂದ ಟ್ಯಾಕ್ಸಿ ವಾಹನ, ಸರಕು ಸಾಗಣಿಕೆ ವಾಹನ ಅಥವಾ ವಿವಿಧ ಆರ್ಥಿಕ ಚಟುವಟಿಕೆಗಳಿಗೆ ಸಾಲ ಪಡೆದ ಫಲಾನುಭವಿಗಳಿಗೆ ಶೇ.25 ರಷ್ಟು ಅಥವಾ ಗರಿಷ್ಠ ರೂ. 1.00 ಲಕ್ಷಗಳ ಸಹಾಯಧನ) ಅಧಿಕೃತ ಪ್ರಾಧಿಕಾರದಿಂದ ಎಲ್.ಎಂ.ವಿ ವಾಹನ ಚಾಲನಾ ಪರವಾನಗೆ ಪಡೆದಿರಬೇಕು ಹಾಗೂ ಕನಿಷ್ಠ 8ನೇ ತರಗತಿ ವಿದ್ಯಾರ್ಹತೆ ಹೊಂದಿರಬೇಕು. |
| 5. | ಉನ್ನತ ವ್ಯಾಸಂಗದಲ್ಲಿರುವ ಕಾಲೇಜು ವಿದ್ಯಾರ್ಥಿಗಳ ಶುಲ್ಕಗಳ ಮರುಪಾವತಿ. |
| 6. | ಪೌರ ಕಾರ್ಮಿಕರು, ಗ್ಯಾಂಗ್‌ಮೆನ್ ಹಾಗೂ ಮಾಲಿಗಳ ಮಕ್ಕಳಿಗೆ ಕಲ್ಯಾಣ ಕಾರ್ಯಕ್ರಮಗಳು. |
| 7. | ರಾಜೀವ್ ಗಾಂಧಿ ಗ್ರಾಮಿಣ ವಸತಿ ನಿಗಮ ಇವರ ಸಹಯೋಗದೊಂದಿಗೆ ವಸತಿ ನಿರ್ಮಾಣಕ್ಕಾಗಿ ಸಹಾಯಧನ. |

## IV. ಮಹಿಳಾ ಮತ್ತು ಮಕ್ಕಳ ಕಲ್ಯಾಣ ಕಾರ್ಯಕ್ರಮಗಳು.

| ಕ್ರ.ಸಂ | ಕಾರ್ಯಕ್ರಮದ ವಿವರ |
|---|---|
| 1. | ಗೃಹ ನಿರ್ವಹಣೆ ತರಬೇತಿ |
| 2. | ಅಪೆರಲ್ ಟ್ರೈನಿಂಗ್ ಮತ್ತು ಡಿಸೈನ್ ತರಬೇತಿ. ಕನಿಷ್ಠ 8ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. |
| 3. | ನ್ಯಾಷನಲ್ ಇನ್ಸಿಟ್ಯೂಟ್ ಆಫ್ ಫ್ಯಾಷನ್ ಟೆಕ್ನಾಲಜಿ ತರಬೇತಿ ಅವಧಿ 3 ತಿಂಗಳು, 6 ತಿಂಗಳು, 1 ವರ್ಷ, (ನಿರ್ಗತಿಕ ಹಾಗೂ ವಿಧವೆಯುವರಿಗೆ ಆದ್ಯತೆ ನೀಡಲಾಗುವುದು) ಸಂಸ್ಥೆಯವರು ಪ್ರವೇಶ ಪರೀಕ್ಷೆ ಮಾಡುತ್ತಾರೆ, ಅಂತಹ ಅಭ್ಯರ್ಥಿಗಳಿಗೆ ಫೀ ತುಂಬಲಾಗುವುದು. ವಿದ್ಯಾರ್ಹತೆ ಎಸ್.ಎಸ್.ಎಲ್.ಸಿ ಮತ್ತು ಪಿಯುಸಿ, ವಯಸ್ಸು 18 ರಿಂದ 35. |
| 4. | ಮಹಿಳಾ ಸ್ವಸಹಾಯ ಗುಂಪಿಗೆ ಸ್ವಯಂ ಉದ್ಯೋಗ ಕಲ್ಪಿಸಲು ಸಹಾಯ ಧನ |
| 5. | ಅಂಗನವಾಡಿ ಕೇಂದ್ರಗಳ ಅಭಿವೃದ್ಧಿ ಮತ್ತು ನಿರ್ವಹಣೆ ಯೋಜನೆ. |
| 6. | 18 ವರ್ಷದೊಳಗಿನ ಅನಾಥ, ನಿರ್ಗತಿಕ, ಮಾನಸಿಕ ಅಸ್ವಸ್ಥರ ಮಕ್ಕಳಿಗೆ ನಡೆಸಲಾಗುವ ಸಂಸ್ಥೆಗಳಿಗೆ ಸಹಾಯಧನ |

| | |
|---|---|
| 7. | 14 ವರ್ಷದೊಳಗಿನ ಬಾಲ ಕಾರ್ಮಿಕರಿಗೆ, ಅನಾಥ ಮಕ್ಕಳಿಗೆ ವಿಶೇಷ ತರಬೇತಿ ಹಾಗೂ ಶೈಕ್ಷಣಿಕ ಕಾರ್ಯಕ್ರಮ. |

## V. ವಿಕಲಚೇತನರ ಹಾಗೂ ಸಾಮಾನ್ಯ ವರ್ಗದವರ ಕಲ್ಯಾಣ ಕಾರ್ಯಕ್ರಮಗಳು.

| ಕ್ರ.ಸಂ | ಕಾರ್ಯಕ್ರಮದ ವಿವರ |
|---|---|
| 1. | ಹಿರಿಯ ನಾಗರಿಕರಿಗೆ ಮಧ್ಯಾಹ್ನದ ಬಿಸಿ ಊಟದ ಕಾರ್ಯಕ್ರಮ / ವೈದ್ಯಕೀಯ ಸೇವೆ. |
| 2. | ಹಿಜಿಡಾ/ಲೈಂಗಿಕ ಕಾರ್ಯಕರ್ತರು ಹಾಗೂ ಇತರೆ ವರ್ಗದವರಿಗೆ ಸಹಾಯ (ಸ್ವಯಂ ಸೇವಾ ಸಂಸ್ಥೆಗಳೊಂದಿಗೆ) |
| 3. | ಮಾನಸಿಕ ಅಸ್ವಸ್ಥರಿಗೆ ಪ್ರೋತ್ಸಾಹ ಧನ. |
| 4. | ಅಂಗವಿಕಲರಿಗೆ ಉಪಕರಣಗಳನ್ನು ಒದಗಿಸುವುದು. |
| 5. | ಅಂಗವಿಕಲರಿಗೆ ವೃತ್ತಿ ತರಬೇತಿಯೊಂದಿಗೆ ಉಪಕರಣ ನೀಡುವುದು. |
| 6. | ವಿಕಲಚೇತನರಿಗೆ ಆರೋಗ್ಯ ತಪಾಸಣೆ ಶಿಬಿರ ನಡೆಸುವುದು(ಫಿಸಿಯೋಥೆರಫಿ, ವೈದ್ಯಕೀಯ ಸಲಹೆ, ಮತ್ತು ಮಾರ್ಗದರ್ಶನ). |

## VI. ಕೊಳಚೆ ಪ್ರದೇಶದ ನಿವಾಸಿಗಳಿಗೆ, ಸಫಾಯಿ ಕರ್ಮಚಾರಿಗಳಿಗೆ, ಪೌರ ಕಾರ್ಮಿಕರಿಗೆ, ಆಟೋ ಚಾಲಕರಿಗೆ, ಮತ್ತು

ಬಿ.ಪಿ.ಎಲ್ ಕಾರ್ಡ್‌ದಾರರಿಗೆ ಪಂಡಿತ್ ದೀನದಯಾಳ್ ಸುವರ್ಣ ಆರೋಗ್ಯ ಸುರಕ್ಷಾ ವಿಮಾ ಯೋಜನೆ.

**ಅರ್ಹತೆಗಳು:-**

1. ಅರ್ಜಿದಾರರು ಪಶ್ಚಿಮ ವಲಯ ವ್ಯಾಪ್ತಿಯಲ್ಲಿ ವಾಸಿಸುತ್ತಿರಬೇಕು.
2. ಒಂದು ಕುಟುಂಬದಲ್ಲಿ ಒಂದು ಯೋಜನೆಗೆ ಒಬ್ಬರು ಮಾತ್ರ ಅರ್ಹರಾಗಿರುತ್ತಾರೆ.
3. ಯೋಜನೆಗೆ ನಿಗಧಿಪಡಿಸಿರುವ ಅಭ್ಯರ್ಥಿಗಳ ವಯೋಮಿತಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದವರಿಗೆ 18 ರಿಂದ 40 ವರ್ಷ, ಹಿಂದುಳಿದ ಮತ್ತು ಅಲ್ಪಸಂಖ್ಯಾತರ ವರ್ಗದವರಿಗೆ 18 ರಿಂದ 35 ವರ್ಷ.

4. ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ತಹಶೀಲ್ದಾರ್‌ರವರಿಂದ ಪಡೆದ ಕಳೆದ 5 ವರ್ಷದ ಅವಧಿಯೊಳಗಿನ ಜಾತಿ ಪ್ರಮಾಣ ಪತ್ರ ಹಾಗೂ ಪ್ರಸಕ್ತ ಸಾಲಿನ ರೂ. 1.00 ಲಕ್ಷಗಳ ಮಿತಿಗೊಳಪಟ್ಟ ವಾರ್ಷಿಕ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

5. ಹಿಂದುಳಿದ ವರ್ಗದವರು ತಹಶೀಲ್ದಾರ್‌ರವರಿಂದ ಪ್ರಸಕ್ತ ಸಾಲಿನಲ್ಲಿ ಪಡೆದ ಜಾತಿ ಮತ್ತು ರೂ. 22,000/-ಗಳ ಮಿತಿಗೊಳಪಟ್ಟ ವಾರ್ಷಿಕ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

6. ಅಲ್ಪಸಂಖ್ಯಾತ ವರ್ಗದವರು ತಹಶೀಲ್ದಾರ್‌ರವರಿಂದ ಪ್ರಸಕ್ತ ಸಾಲಿನಲ್ಲಿ ಪಡೆದ ಜಾತಿ ಮತ್ತು ರೂ. 2.00 ಲಕ್ಷಗಳ ಮಿತಿಗೊಳಪಟ್ಟ ವಾರ್ಷಿಕ ಆದಾಯ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

7. ಅರ್ಜಿದಾರರು ವಯೋಮಿತಿ ಧೃಢೀಕರಿಸಲು ಎಸ್.ಎಸ್.ಎಲ್.ಸಿ ಅಂಕಪಟ್ಟಿ/ಶಾಲಾ-ಕಾಲೇಜಿನ ವರ್ಗಾವಣೆ ಪ್ರಮಾಣ ಪತ್ರ/ಕ್ಯೂಮಿಲೇಟಿವ್ ರೆಕಾರ್ಡ್/ಜನನ ಪ್ರಮಾಣ ಪತ್ರದ ಪ್ರತಿ ಲಗತ್ತಿಸಬೇಕು.

8. ಅಭ್ಯರ್ಥಿಗಳು ಅರ್ಜಿಯೊಂದಿಗೆ 3 ಇತ್ತೀಚಿನ ಭಾವಚಿತ್ರಗಳು, ಯೋಜನೆಗೆ ನಿಗಧಿಪಡಿಸಿದ ವಿದ್ಯಾರ್ಹತೆಯ ದಾಖಲೆಗಳು, ವಾಸ ಸ್ಥಳ ದೃಢೀಕರಣ ಪತ್ರಗಳಾದ ಮತದಾರರ ಗುರುತಿನ ಚೀಟಿ/ಪಡಿತರ ಚೀಟಿ/ಆಯಾ ವಾರ್ಡ್‌ಗಳಿಗೆ ಸಂಬಂಧಿಸಿದ ಕಂದಾಯ ಅಧಿಕಾರಿಗಳಿಂದ ವಾಸ ಧೃಢೀಕರಣ ಪತ್ರ ಸಲ್ಲಿಸಬೇಕು.

9. ಅಭ್ಯರ್ಥಿಗಳು ಅರ್ಜಿಯೊಂದಿಗೆ ಲಗತ್ತಿಸುವ ಎಲ್ಲಾ ದಾಖಲೆಗಳನ್ನು (ಜೆರಾಕ್ಸ್ ಪ್ರತಿಗಳನ್ನು) ಗೆಜೆಟೆಡ್ ಅಧಿಕಾರಿಯಿಂದ ಧೃಢೀಕರಿಸಿರಬೇಕು.

10. ಆರ್ಥಿಕ ಸಹಾಯ ಕೋರಿ ಸಲ್ಲಿಸುವ ಅರ್ಜಿದಾರರು ಈ ಹಿಂದೆ ಸರ್ಕಾರ/ಸರ್ಕಾರೇತರ ಸಂಸ್ಥೆಗಳಲ್ಲಿ ಉಚಿತವಾಗಿ/ಸಾಲದ ಮುಖಾಂತರ ಯಾವುದೇ ಸೌಲಭ್ಯ/ಸವಲತ್ತುಗಳನ್ನು ಪಡೆದಿಲ್ಲವೆಂದು ರೂ.20-00ಗಳ ಛಾಪ ಕಾಗದಲ್ಲಿ ಮುಚ್ಚಳಿಕೆ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.

11. ತರಬೇತಿಗೆ ಕೋರಿ ಸಲ್ಲಿಸುವ ಅರ್ಜಿದಾರರು ತರಬೇತಿಯ ಅವಧಿಯ ಮಧ್ಯದಲ್ಲಿ ಬಿಟ್ಟು ಹೋದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಆಗುವ ವೆಚ್ಚವನ್ನು ಭರಿಸಲು ಸಿದ್ದನಿರುವೆನೆಂದು ಬಿಳಿ ಹಾಳೆಯಲ್ಲಿ ಮುಚ್ಚಳಿಕೆ ಪತ್ರ ನೀಡಬೇಕು.

12. ವಿವಿಧ ತರಬೇತಿಗಳಿಗೆ ಆಯ್ಕೆಯಾಗುವ ಅಭ್ಯರ್ಥಿಗಳನ್ನು ತರಬೇತಿ ನೀಡುವ ಸಂಸ್ಥೆಗಳಿಗೆ ಪ್ರಾಯೋಜಿಸಲಾಗುವುದು.

13. ಮೇಲ್ಕಂಡ ಕಾರ್ಯಕ್ರಮಗಳಿಗೆ ವಾರ್ಡ್‌ವಾರು ನಿಗಧಿಪಡಿಸಿರುವ ಭೌತಿಕ ಗುರಿಗೆ ಅನುಗುಣವಾಗಿ ಮಾತ್ರ ಅರ್ಜಿಗಳನ್ನು ವಿತರಿಸಿರುವುದರಿಂದ ಸದರಿ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಇಚ್ಚಿಸುವ ಪ.ಜಾ./ಪ.ಪಂಗಡದ ಅಭ್ಯರ್ಥಿಗಳು ರೂ.5/- ಹಾಗೂ ಹಿಂದುಳಿದ ಮತ್ತು ಅಲ್ಪ ಸಂಖ್ಯಾತ ವರ್ಗದ ಅಭ್ಯರ್ಥಿಗಳು ರೂ. 10/-ಗಳನ್ನು ಪಾವತಿಸಿ, ಅರ್ಜಿಗಳನ್ನು ಬೃ.ಬೆ.ಮ.ಪಾ (ಪಶ್ಚಿಮ) ವಲಯ ಕಲ್ಯಾಣ ಇಲಾಖೆಯ ಕಛೇರಿಯಲ್ಲಿ ಪಡೆಯಬಹುದು.

14. ಅರ್ಜಿಗಳನ್ನು ದಿನಾಂಕ: 11/10/2010 ರಿಂದ 4/11/2010 ರವರೆಗೆ ವಿತರಿಸಲಾಗುವುದು. (ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ)

ಭರ್ತಿ ಮಾಡಿದ ಅರ್ಜಿಗಳನ್ನು ಎಲ್ಲಾ ದಾಖಾಲಾತಿಗಳೊಂದಿಗೆ ನಿಗಧಿಪಡಿಸಿದ ಕೊನೆಯ ದಿನಾಂಕ: 10/11/2010ರೊಳಗಾಗಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಪಶ್ಚಿಮ ವಲಯ ಕಛೇರಿ ಕಲ್ಯಾಣ ಇಲಾಖೆಯಲ್ಲಿ ಸಲ್ಲಿಸತಕ್ಕದ್ದು, ತದನಂತರ ಸ್ವೀಕರಿಸಿದ ಅರ್ಜಿಗಳನ್ನು ಹಾಗೂ ಅಪೂರ್ಣವಾಗಿ ಭರ್ತಿ ಮಾಡಿದ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೇ ತಿರಸ್ಕರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಲ್ಯಾಣಾಧಿಕಾರಿಗಳು, ಕಲ್ಯಾಣ ಇಲಾಖೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಪಶ್ಚಿಮ ವಲಯ, ಸಂಪಿಗೆ ರಸ್ತೆ, ಶೇಷಾದ್ರಿಪುರಂ, ಬೆಂಗಳೂರು–20. ಇವರನ್ನು ಸಂಪರ್ಕಿಸಬಹುದಾಗಿದೆ.

**ಜಂಟಿ ಆಯುಕ್ತರು(ಪಶ್ಚಿಮ) ರವರ ಅನುಮೋದನೆಯಂತೆ,**

ಸಹಿ

**ಉಪ ಆಯುಕ್ತರು (ಪಶ್ಚಿಮ ವಲಯ)**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.